ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 928

ಉತ್ತರಿಸಬೇಕಾದ ದಿನಾಂಕ : 13.03.2020

ಸದಸ್ಯರ ಹೆಸರು : ಶ್ರೀ ಅರವಿಂದ ಕುಮಾರ ಅರಳಿ (ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸುವ ಸಚಿವರು : ಮಾನ್ಯ ಪ್ರವಾಸೋದ್ಯಮ ಮತ್ತು ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು

ಕ್ರಸಂ	ಪ್ರಶ್ನೆ	ಉತ್ತರ
ಅ	ಬೀದರ್ ನಗರದ ನೆಹರು ಕ್ರೀಡಾಂಗಣದಲ್ಲಿ ಕಬಡ್ಡಿ, ಖೋ-ಖೋ ಮತ್ತು ಸ್ಕೇಟಿಂಗ್ ಪ್ರಾಂಗಣ ಮಾಡುವ ಅವಶ್ಯಕತೆಯಿದ್ದು, ಸದರಿ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಇದ್ದಲ್ಲಿ ಅದನ್ನು ಯಾವಾಗ ಪ್ರಾರಂಭಿಸಲಾಗುವುದು; ಇಲ್ಲದಿದ್ದರೆ, ಕಾರಣವೇನು?	ಬೀದರ್ ನಗರದ ನೆಹರೂ ಜಿಲ್ಲಾ ಕ್ರೀಡಾಂಗಣದಲ್ಲಿ ಕಬಡ್ಡಿ ಅಂಕಣದ ನಿರ್ಮಾಣ ಕಾರ್ಯ ಕಲ್ಯಾಣ-ಕರ್ನಾಟಕ ಪ್ರದೇಶಾಭಿವೃದ್ಧಿ ನಿಗಮದ ವತಿಯಿಂದ ಕೈಗೊಳ್ಳಲಾಗಿದ್ದು, ಕಾಮಗಾರಿ ಪ್ರಗತಿಯಲ್ಲಿದೆ. ಬೀದರ್ ಜಿಲ್ಲೆಗೆ 2017-18 ನೇ ಸಾಲಿನಲ್ಲಿ ಎರಡು ಜೊತೆ ಆಧುನಿಕ ಕಬಡ್ಡಿ ಮ್ಯಾಟ್ ಗಳನ್ನು ಒದಗಿಸಲಾಗಿದೆ. ಖೋ-ಖೋ ಮತ್ತು ಸ್ಕೇಟಿಂಗ್ ಪ್ರಾಂಗಣಗಳ ನಿರ್ಮಾಣದ ಬಗ್ಗೆ ಜಿಲ್ಲೆಯಿಂದ ಯಾವುದೇ ಪ್ರಸ್ತಾವನೆ ಸ್ವೀಕೃತವಾಗಿರುವುದಿಲ್ಲ.

ವೈಎಸ್ ಡಿ-/ಇಬಿಬಿ/42/2020

(ಸಿ. ಟಿ. ರವಿ)

ಪ್ರವಾಸೋದ್ಯಮ ಮತ್ತು ಕನ್ನಡ ಮತ್ತು ಸಂಸ್ಕೃತಿ
ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು.